# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಸದಸ್ಯರ ಹೆಸರು | ಶ್ರೀ ಯು.ಬಿ.ವೆಂಕಟೇಶ್<br>(ನಾಮನಿರ್ದೇಶನ ಹೊಂದಿದವರು) |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 77(748) |
| ಉತ್ತರಿಸಬೇಕಾದ ದಿನಾಂಕ | 23.07.2024 |
| ಉತ್ತರಿಸಬೇಕಾದವರು | ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಕೋಟ್ಯಾಂತರ ಅವ್ಯವಹಾರವಾಗಿರುವ ದೂರಿನ ಬಗ್ಗೆ ನೇಮಿಸಲಾದ ಎರಡು ತನಿಖಾ ತಂಡಗಳು ಸರ್ಕಾರಕ್ಕೆ ತನಿಖಾ ವರದಿ ಸಲ್ಲಿಸಿರುವುದು ನಿಜವೇ; | ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದಿರುವ ಅವ್ಯವಹಾರಗಳ ಕುರಿತು ಸ್ವೀಕೃತಗೊಂಡಿದ್ದ ದೂರುಗಳಿಗೆ ಸಂಬಂಧಿಸಿದಂತೆ ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ತನಿಖಾ ತಂಡಗಳನ್ನು ಸರ್ಕಾರದಿಂದ ನೇಮಿಸಿ ಆದೇಶಿಸಲಾಗಿರುತ್ತದೆ. ಸದರಿ ತನಿಖಾ ತಂಡಗಳು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತದೆ. |
| ಆ) | ತನಿಖಾ ವರದಿ ಸಲ್ಲಿಸಿದ್ದಲ್ಲಿ, ವರದಿಯ ಮುಖ್ಯಾಂಶಗಳೇನು; | ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ ರವರು ತನಿಖೆ ನಡೆಸಿ ತನಿಖಾ ವರದಿಯಲ್ಲಿ ಪ್ರಾಧಿಕಾರದ ಆಯುಕ್ತರು ಹಾಗೂ ಅಧ್ಯಕ್ಷರು ನಿಯಮಗಳನ್ನು ಉಲ್ಲಂಘಿಸಿ ಕರ್ತವ್ಯಲೋಪವೆಸಗಿರುವುದಾಗಿ ಅಭಿಪ್ರಾಯ ನೀಡಿರುತ್ತಾರೆ.<br><br>ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ತನಿಖಾ ತಂಡವು, ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಬೀದರ್ ನಗರದ ಚಿದ್ರಿ ಮತ್ತು ನೌಬಾದ್ ಸ.ನಂ. ಗಳಲ್ಲಿ ನಿವೇಶನ ಹಂಚಿಕೆ ಮಾಡುವಲ್ಲಿ ಪ್ರಾಧಿಕಾರದ ವತಿಯಿಂದ ಕಾರ್ಯವಿಧಾನವನ್ನು ಅನುಸರಿಸದೇ ಇರುವುದು ಹಾಗೂ ಇದರಿಂದ ಪ್ರಾಧಿಕಾರಕ್ಕೆ ಆರ್ಥಿಕ ನಷ್ಟವಾಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ ಎಂದು ಅಭಿಪ್ರಾಯ ನೀಡಿರುತ್ತದೆ. |

| | | |
|---|---|---|
| ಇ) | ವರದಿಯಲ್ಲಿ ಈ ಹಿಂದಿನ ಅಧ್ಯಕ್ಷರ ವಿರುದ್ಧ ಕ್ರಿಮಿನಲ್ ದೂರು ದಾಖಲಿಸುವಂತೆ ಸರ್ಕಾರ ಆದೇಶಿಸಿದೆಯೇ; | ಸರ್ಕಾರದ ಪತ್ರ ಸಂಖ್ಯೆ:ನಅಇ 187 ಗುಅಪ್ರಾ 2023, ದಿನಾಂಕ:13.06.2024 ರಲ್ಲಿ ಕಾನೂನು ಇಲಾಖೆಯು ನೀಡಿರುವ ಅಭಿಪ್ರಾಯದಂತೆ, ಹಿಂದಿನ ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಇವರಿಂದ ಪ್ರಾಧಿಕಾರಕ್ಕೆ / ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಿದ್ದಲ್ಲಿ ಸದರಿಯವರ ವಿರುದ್ಧ ಮಾನ್ಯ ನ್ಯಾಯಾಲಯದಲ್ಲಿ ಸಿವಿಲ್ ದಾವೆ ಹೂಡಿ ವಸೂಲಾತಿಗೆ ಕ್ರಮವಹಿಸುವಂತೆ ಮತ್ತು ಕರ್ತವ್ಯಲೋಪವೆಸಗಿರುವುದರಿಂದ ಇವರ ವಿರುದ್ಧ ಭಾರತೀಯ ದಂಡ ಸಂಹಿತೆಯ 409 ರನ್ವಯ ಕ್ರಿಮಿನಲ್ ಪ್ರಕರಣ ದಾಖಲಿಸಲು ಆದೇಶಿಸಲಾಗಿದೆ. |
| ಈ) | ಆದೇಶಿಸಿದ್ದಲ್ಲಿ, ಈವರೆಗೂ ಕ್ರಿಮಿನಲ್ ಪ್ರಕರಣ ದಾಖಲಿಸದಿರಲು ಕಾರಣಗಳೇನು? | ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಪತ್ರ ಸಂಖ್ಯೆ:ಬೀನಪ್ರಾ / ವಿವಿಧ / ತನಿಖೆ /ದೂರು /2024-25 / 305-306, ದಿನಾಂಕ:09.07.2024ರಲ್ಲಿ ಕ್ರಿಮಿನಲ್ ಪ್ರಕರಣ ದಾಖಲಿಸಲು ಪೊಲೀಸ್ ವರಿಷ್ಠಾಧಿಕಾರಿಗಳು, ಬೀದರ್ ಜಿಲ್ಲೆ, ಬೀದರ್ ಇವರಿಗೆ ಕೋರಲಾಗಿರುತ್ತದೆ. |

ಸಂಖ್ಯೆ : ನಅಇ 56 ಎಲ್‌ಸಿಕ್ಯೂ 2024

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಮತ್ತು
ನಗರ ಯೋಜನೆ ಸಚಿವರು